# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-37ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ದಿನಾಂಕ: 03.07..2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.37 ಯಶವಂತಪುರ ವಾರ್ಡ್‌ನ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.37ರ ವಾರ್ಡ್ ಕಛೇರಿ, ಮಾಡೆಲ್ ಕಾಲೋನಿ, 2ನೇ ಅಡ್ಡರಸ್ತೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು**

**ಸಭೆಗೆ ಹಾಜರಿದ್ದ ಮಾನ್ಯ ಸದಸ್ಯರು:-**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಹುದ್ದೆ | ಪದನಾಮ | ಹಾಜರಾತಿ |
|---|---|---|---|---|
| 1 | ಶ್ರೀ ಎನ್. ಜಿ. ಉಮೇಶ್ | ಸ.ಕಾ.ನಿ.ಅ., | ಅಧ್ಯಕ್ಷರು/ ವಾರ್ಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 2 | ಎನ್. ಜಿ. ಉಮೇಶ್ | ಸಹಾಯಕ ಅಭಿಯಂತರರು | ಸದಸ್ಯರು | ಹಾಜರಿದ್ದರು |
| 3 | ಡಾ|| ಹರ್ಷಿತ್ | ಕೋವಿಡ್ ವೈದ್ಯಾಧಿಕಾರಿಗಳು | ಸದಸ್ಯರು | ಹಾಜರಿದ್ದರು |
| 4 | ಸುಜಾತಾ | ಹಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 5 | ಗೋವಿಂದರಾಜು ಕೆ. | ಕಂದಾಯ ವಸೂಲಿಗಾರರು ಸ.ಕಂ.ಅ. (ಯಶವಂತಪುರ) | ಸದಸ್ಯರು | ಹಾಜರಿದ್ದರು |
| 6 | ಚನ್ನೇಶಪ್ಪ | ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ | ಸದಸ್ಯರು | ಹಾಜರಿದ್ದರು |
| 7 | ಸುಜಾತಾ | ಲಿಂಕ್ ವರ್ಕರ್ | ಸದಸ್ಯರು | ಹಾಜರಿದ್ದರು |
| 8 | ಸತ್ಯವತಿ | ಲಿಂಕ್ ವರ್ಕರ್ | ಸದಸ್ಯರು | ಹಾಜರಿದ್ದರು |
| 9 | ಶಿವಪ್ರಕಾಶ್ ಎಂ. | ಬಿ.ಎಲ್.ಓ. ಹೋಂ ಐಸೋಲೇಷನ್ ಟೀಂ | ಸದಸ್ಯರು | ಹಾಜರಿದ್ದರು |
| 10 | ಮುರಳಿ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 11 | ಬಿ. ಜಾನ್ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |

ವಾರ್ಡ್-37ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ಮಾನ್ಯ ಅಧ್ಯಕ್ಷರು, ಸಭೆಯ ಸದಸ್ಯರುಗಳನ್ನು ಪರಸ್ಪರ ಪರಿಚಯ ಮಾಡಿಸಿ, ಮಾರ್ಗಸೂಚಿಯಂತೆ, ಈ ಕೆಳಗಿನ ವಿಷಯಗಳನ್ನು ಸಭೆಯ ಮುಂದಿಟ್ಟು ವಾರ್ಡ್ ಸಮಿತಿ ಸಭೆಯು ನಿರ್ವಹಿಸಬೇಕಾದ ಅಂಶಗಳನ್ನು ತಿಳಿಸಿ, ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಕಂಡಂತೆ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

1) ಘನತ್ಯಾಜ್ಯ ನಿರ್ವಹಣೆ :

ಪೌರ ಕಾರ್ಮಿಕರು ವಾರ್ಡ್‌ನಲ್ಲಿ ಕೆಲಸ ಮಾಡಲು ಮಾಸ್ಕ್ ಹಾಗೂ ಕೈಗವಸುಗಳನ್ನು ಸಮರ್ಪಕವಾಗಿ ಒದಗಿಸುವ ಕಿರಿಯ ಆರೋಗ್ಯ ಪರಿವೀಕ್ಷಕರು ಅಧ್ಯಕ್ಷರಿಗೆ ತಿಳಿಸಿದರು.

ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ಕೆಲವೊಂದು ಕಡೆ ಬ್ಲಾಕ್‌ಸ್ಪಾಟ್‌ಗಳು ನಿರ್ಮಾಣವಾಗಿದ್ದು, ತೆರವುಗೊಳಿಸಲು, ಬ್ಯಾನರ್‌ಗಳು ಹಾಗೂ ಸಿಸಿಟಿವಿ ಕ್ಯಾಮರಾಗಳ ಅವಶ್ಯಕತೆ ಇರುವುದಾಗಿ ಅಧ್ಯಕ್ಷರಿಗೆ ಮನವಿ ಮಾಡಿದರು.

ಪ್ರಸ್ತಾಪಿತ ವಿಷಯದ ಬಗ್ಗೆ ಅಧ್ಯಕ್ಷರು ಮಾತನಾಡಿ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರೊಂದಿಗೆ ಚರ್ಚಿಸುವುದಾಗಿ ತಿಳಿಸಿರು.

2) ಪೌರ ಕಾರ್ಮಿಕರ ಬಗ್ಗೆ :

ವಾರ್ಡ್-37ರಲ್ಲಿ ಪ್ರಸ್ತುತ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರಿಗೆ ಮುಖಗವಸು, ಕೈಗವಸು ಮತ್ತು ಪೊರಕೆಗಳನ್ನು ಒದಗಿಸುತ್ತಿಲ್ಲವೆಂದು ಕಿರಿಯ ಆರೋಗ್ಯ ಪರಿವೀಕ್ಷಕರು ಅಧ್ಯಕ್ಷರಲ್ಲಿ ಸಭೆಯಲ್ಲಿ ತಿಳಿಸಿರುತ್ತಾರೆ. ಅಧ್ಯಕ್ಷರು ಮಾತನಾಡಿ, ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಸೂಕ್ತ ಕ್ರಮಕೈಗೊಳ್ಳಲು ಸೂಚಿಸುತ್ತೇನೆಂದು ಸಭೆಗೆ ತಿಳಿಸಿದರು.

3) ಆರೋಗ್ಯ :-

ವ್ಯಾಕ್ಸೀನ್ ಬಗ್ಗೆ ಜಾಗೃತಿ ಮೂಡಿಸಲು ವಾರ್ಡ್‌ನ ವ್ಯಾಪ್ತಿಯಲ್ಲಿ ಧ್ವನಿವರ್ಧಕ ಹಾಗೂ ಆಟೋ ಮೂಲಕ ಸಾರ್ವಜನಿಕರಿಗೆ ತಿಳಿಸಲಾಗುತ್ತಿದೆ ಎಂದು ವೈದ್ಯಾಧಿಕಾರಿಗಳು ಸಭೆಯಲ್ಲಿ ಹೇಳಿದರು.

4. ಬಿಡಬ್ಲ್ಯೂಎಸ್‌ಎಸ್‌ಬಿ ಇಲಾಖೆ:-

2ನೇ ಮುಖ್ಯರಸ್ತೆ, ಬಿ ಕೆ ನಗರದಲ್ಲಿ ಪದೇ ಪದೇ ಮ್ಯಾನ್‌ಹೋಲ್ ಬ್ಲಾಕ್ ಸಮಸ್ಯೆ ಕಂಡುಬರುತ್ತಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸಂಬಂಧಪಟ್ಟ ಬಿಡಬ್ಲ್ಯೂಎಸ್‌ಎಸ್‌ಬಿ ಸಹಾಯಕ ಅಭಿಯಂತರರು ಸೂಕ್ತ ಕ್ರಮ ಕೈಗೊಂಡು ಸಮಸ್ಯೆಗಳನ್ನು ಸರಿಪಡಿಸಬೇಕೆಂದು ಅಧ್ಯಕ್ಷರು ದೂರವಾಣಿ ಮುಖೇನ ಸೂಚಿಸಿದರು.

5) ಕಾಮಗಾರಿ ಇಲಾಖೆ :

ವಾರ್ಡ್‌ನಲ್ಲಿ ಕೆಲವೊಂದು ಕಡೆ ಚಿಕ್ಕದಾಗಿ ಡೆಬ್ರಿಸ್ ಕಂಡುಬಂದಿದ್ದು, ಅದನ್ನು ಕೂಡಲೇ ತೆರವುಗೊಳಿಸಬೇಕೆಂದು ಸಹಾಯಕ ಅಭಿಯಂತರರು ಅಧ್ಯಕ್ಷರಿಗೆ ತಿಳಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:37

(ಎನ್. ಜಿ. ಉಪ್ಪಾರ್)
ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:37 ನಗರ ಪಾಲಿಕೆ